# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

27

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 19/11/20

# ವಿಜಯನಗರ ಜಿಲ್ಲೆ ಸ್ಥಾಪನೆ

## 7ರಿಂದ ಅಧಿವೇಶನ-ಸಂಪುಟ ಸಭೆ ನಿರ್ಧಾರ

ಸಂ.ಕ.ಸಮಾಚಾರ ಬೆಂಗಳೂರು 19/11/20

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ಬುಧವಾರ ಚುಟುಕಾಗಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಡಿಸೆಂಬರ್ 7ರಿಂದ 15ರವರೆಗೆ ಬೆಂಗಳೂರಿನಲ್ಲಿ ವಿಧಾನ ಮಂಡಲ ಅಧಿವೇಶನ ನಡೆಸುವುದೂ ಸೇರಿದಂತೆ ಕೆಲ ಪ್ರಮುಖ ನಿರ್ಧಾರಗಳನ್ನು ಪ್ರಕಟಿಸಲಾಗಿದೆ.



ಸಚಿವ ಸಂಪುಟ ಸಭೆಯ ಬಳಿಕ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಸಂಪುಟ ಸಭೆಯ ವಿವರಗಳನ್ನು ಸುದ್ದಿಗಾರರಿಗೆ ನೀಡಿ, ವಿಧಾನಮಂಡಲದ ಚಳಿಗಾಲ ಅಧಿವೇಶನವನ್ನು ಡಿಸೆಂಬರ್ 7ರಿಂದ 15ರವರೆಗೆ ನಡೆಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ. ವಿಧಾನಮಂಡಳದ ನಿಯಮಾನುಸಾರ ನವೆಂಬರ್-ಡಿಸೆಂಬರ್ ಮಧ್ಯದಲ್ಲಿ ಅಧಿವೇಶನ ನಡೆಸಬೇಕು. ಹೀಗಾಗಿ ಈ ಬಾರಿಯೂ ಕೊರೊನಾ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲೇ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮೀಸಲಾತಿ ಹೆಚ್ಚಳ ಕುರಿತಂತೆ ಸಂಪುಟ ಉಪ ಸಮಿತಿ ರಚನೆಗೆ ಸಂಪುಟ ಸಭೆ ನಿರ್ಧರಿಸಿದೆ. ಈ ಸಂಪುಟ ಉಪ ಸಮಿತಿಯಲ್ಲಿ ಯಾವ ಯಾವ ಸಚಿವರು ಇರಬೇಕು ಎಂಬುದನ್ನು ಸಿಎಂ ಯಡಿಯೂರಪ್ಪ ಒಂದು ವಾರದಲ್ಲಿ ಪ್ರಕಟಿಸಲಿದ್ದಾರೆ ಎಂದರು.

ಬಳ್ಳಾರಿ ಜಿಲ್ಲೆಯನ್ನು ವಿಭಜಿಸಿ ವಿಜಯನಗರ ಜಿಲ್ಲೆ ರಚನೆಗೂ ಸಂಪುಟ ಸಭೆ ತಾತ್ವಿಕ ಅನುಮೋದನೆ ನೀಡಿದೆ. ನೂತನ ಜಿಲ್ಲೆಯ ಸಂಪೂರ್ಣ ಚಿತ್ರಣ ಕುರಿತಂತೆ ಮುಂದಿನ ಸಂಪುಟ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಬಳ್ಳಾರಿ ಜಿಲ್ಲೆ ವಿಭಜನೆಯ ಸರ್ಕಾರದ ನಿರ್ಧಾರ ಬಿಜೆಪಿಯಲ್ಲೇ ಒಡಕುಂಟು ಮಾಡಿದ್ದು ಸಚಿವ ಆನಂದ್ ಸಿಂಗ್ ಅವರು ಯಡಿಯೂರಪ್ಪ ಅವರ ನಿರ್ಧಾರವನ್ನು ಐತಿಹಾಸಿಕ ಎಂದು ಬಣ್ಣಿಸಿದ್ದರೆ, ಬಳ್ಳಾರಿ ನಗರ ಬಿಜೆಪಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ ಬಲವಾಗಿ ಖಂಡಿಸಿದ್ದಾರೆ. ವಿಜಯನಗರ ಜಿಲ್ಲೆ ರಚನೆ ನಿರ್ಧಾರ ಇದೀಗ ಹೊಸ ವಿವಾದಕ್ಕೆ ನಾಂದಿಯಾಗಿದೆ.